ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 14-02-2017

# ಪತ್ರಿಕಾ ಆಮಂತ್ರಣ

1. National Seminar on Role of Wood in Climate Change Mitigation
   Date: 15-02-2017 Wednesday at 10.00 A.M.
   Venue: Institute of Wood Science and Technology,
   Malleswaram, Bangalore 560 003

2. 2016 ಗೌರವ ಫೆಲೋಶಿಫ್ ಪ್ರದಾನ ಸಮಾರಂಭ:

ಉದ್ಘಾಟನೆ:
ಡಾ: ಸಿದ್ಧಲಿಂಗಯ್ಯ,
ಜನಪ್ರಿಯ ಕವಿಗಳು
ಮುಖ್ಯ ಅತಿಥಿ:
ಕೆ.ಎ. ದಯಾನಂದ,
ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಅಧ್ಯಕ್ಷತೆ:
ಡಾ: ಎಂ.ಎಸ್. ಮೂರ್ತಿ,
ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ, ಬೆಂಗಳೂರು
ಸ್ಥಳ; ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ,
ಬೆಂಗಳೂರು
ದಿನಾಂಕ: 15-2-2017 ಬುಧವಾರ ಬೆಳಿಗ್ಗೆ 10-30 ಗಂಟೆಗೆ

3. ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ಕಾರ್ಮಿಕ ಇಲಾಖೆಯ ಅಧಿಕಾರಿಗಳು ಹಾಗೂ ಕನ್ನಡ ಸಂಘ ಕಾರ್ಮಿಕ ಮುಖಂಡರೊಂದಿಗೆ ಭೇಟಿ:

ದಿನಾಂಕ: 15-2-2017 ಬುಧವಾರ

ಸ್ಥಳ: ಮಹಾಲೇಖಪಾಲರ ಕಛೇರಿ, ಬೆಳಿಗ್ಗೆ 11-00 ಗಂಟೆಗೆ

ಸ್ಥಳ ಕೆನರಾ ಬ್ಯಾಂಕ್ ಮುಖ್ಯ ಕಛೇರಿ ಮಧ್ಯಾಹ್ನ 12-30 ಗಂಟೆಗೆ

ಸ್ಥಳ: ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಮುಖ್ಯ ಕಛೇರಿ ಮಧ್ಯಾಹ್ನ 2-30 ಗಂಟೆಗೆ

4. ಪತ್ರಿಕಾಗೋಷ್ಠಿ:

ಡಾ: ಆರತಿ ಕೃಷ್ಣ,
ಉಪಾಧ್ಯಕ್ಷರು, ಅನಿವಾಸಿ ಭಾರತೀಯ ಸಮಿತಿ- ಕರ್ನಾಟಕ
ದಿನಾಂಕ 15-02-2017 ಬುಧವಾರ ಮಧ್ಯಾಹ್ನ 12-00 ಗಂಟೆಗೆ
ಕೊಠಡಿ ಸಂಖ್ಯೆ 06 ಮತ್ತು 07
ಅನಿವಾಸಿ ಭಾರತೀಯ ಸಮಿತಿಯ ಕಛೇರಿ, ವಿಕಾಸಸೌಧ, ನೆಲಮಹಡಿ, ಬೆಂಗಳೂರು

## ಪತ್ರಿಕಾ ಪ್ರಕಟಣೆ

## ವಿಧಾನ ಸಭೆಯಲ್ಲಿಂದು:

### ರಾಜ್ಯದಲ್ಲಿ ಭೀಕರ ಬರ: ಪರಿಸ್ಥಿತಿ ಎದುರಿಸಲು ಸರ್ಕಾರ ಸನ್ನದ್ಧ

**ಬೆಂಗಳೂರು, ಫೆ. 14: ರಾಜ್ಯದಲ್ಲಿ ಹಿಂದೆಂದೂ ಕಾಣದಂತಹ ಭೀಕರ ಬರ ಪರಿಸ್ಥಿತಿ ಎದುರಾಗಿರುವ ಹಿನ್ನಲೆಯಲ್ಲಿ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ರಾಜ್ಯ ಸರ್ಕಾರ ಸಿದ್ದವಾಗಿದ್ದು, ಕುಡಿಯುವ ನೀರು, ಜಾನುವಾರುಗಳ ಮೇವಿನ ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸಭೆಯಲ್ಲಿಂದು ತಿಳಿಸಿದರು.**

**ಕಳೆದ 2015 ಮತ್ತು 2016ರಲ್ಲಿ ತೀವ್ರ ಮಳೆ ಅಭಾವದಿಂದ ರಾಜ್ಯದಲ್ಲಿ ಕುಡಿಯುವ ನೀರಿನ ಸಮಸ್ಯೆ ಮತ್ತು ರಾಸುಗಳಿಗೆ ಮೇವಿನ ಕೊರತೆ ಎದುರಾಗಿದ್ದು, ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಿ.ಪಂ ಸಿಇಓಗಳು ಟ್ಯಾಂಕರ್ ಮೂಲಕ ನೀರು ಸರಬರಾಜು, ಗೋಶಾಲೆ ತೆರೆಯುವ ಮೂಲಕ ಎಲ್ಲಿಯೂ ಸಹ ಕುಡಿಯುವ ನೀರು ಮತ್ತು ಮೇವಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.**

ಸರ್ಕಾರದ ಅನ್ನಭಾಗ್ಯ ಯೋಜನೆಯ ಅನುಷ್ಠಾನದಿಂದಾಗಿ ಇಂತಹ ಭೀಕರ ಬರಗಾಲದಲ್ಲೂ ಸಹ ಪರ ರಾಜ್ಯಗಳಿಗೆ ಗುಳೆ ಹೋಗುವವರ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದೆ ಎಂದು ತಿಳಿಸಿದರು.

ರಾಜ್ಯಪಾಲರ ಭಾಷಣದ ಮೇಲಿನ ವಂದನಾರ್ಪಣಾ ಪ್ರಸ್ತಾವದ ಮೇಲೆ ನಡೆದ ಚರ್ಚೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ನಮ್ಮದು ನುಡಿದಂತೆ ನಡೆಯುವ ಸರ್ಕಾರವಾಗಿದ್ದು, ಕಳೆದ 3 ವರ್ಷ ಒಂಭತ್ತು ತಿಂಗಳಿನಲ್ಲಿ ಮಹಿಳೆಯರು, ಅಶಕ್ತರು ,ಹಿಂದುಳಿದವರು ಸೇರಿದಂತೆ ಸಮಾಜದ ಎಲ್ಲ ವರ್ಗದವರ ಶ್ರೇಯೋಭಿವೃದ್ದಿಗೆ ಸರ್ಕಾರ ಜನಪರ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಅಭಿವೃದ್ದಿ ಪಥದಲ್ಲಿ ನಡೆಯುತ್ತಿದೆ ಎಂದ ಅವರು, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಹಿಂದುಳಿದ ಜನರಿಗೆ ಆರ್ಥಿಕ ಮತ್ತು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಶಕ್ತಿ ತುಂಬುವ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತಿದೆ ಎಂದರು.

ಮಧ್ಯಾಹ್ನದ ಬಿಸಿಯೂಟ ಯೋಜನೆಯಿಂದಾಗಿ ಶಾಲೆಗಳಲ್ಲಿ ಮಕ್ಕಳ ಹಾಜರಾತಿ ಹೆಚ್ಚಾಗಿದೆ, ಕ್ಷೀರಭಾಗ್ಯ ಯೋಜನೆಯಿಂದಾಗಿ ಅಪೌಷ್ಠಿಕತೆಯಿಂದ ಬಳಲುವ ಮಕ್ಕಳ ಸಂಖ್ಯೆಯೂ ಸಹ ಕಡಿಮೆಯಾಗಿದೆ ಎಂದ ಅವರು, ಆರ್‌ಟಿಇ ಕಾಯ್ದೆಯಿಂದಾಗಿ 4.5 ಲಕ್ಷ ಮಕ್ಕಳಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಪಡೆಯುವಂತಾಗಿದ್ದು, ಅದರ ವೆಚ್ಚವನ್ನು ರಾಜ್ಯ ಸರ್ಕಾರ ಭರಿಸುತ್ತಿದೆ ಎಂದರು.

ಹಾಸ್ಟೆಲ್‌ಗಳಲ್ಲಿ ಪ್ರವೇಶ ಸಿಗದ ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸ ಕುಂಠಿತಗೊಳ್ಳದಿರಲು ವಿದ್ಯಾಸಿರಿ ಯೊಜನೆಯನ್ನು ಸರ್ಕಾರ ಜಾರಿಗೆ ತಂದಿದ್ದು, 1 ಲಕ್ಷ ಮಕ್ಕಳು ಯೋಜನೆಯ ಫಲಾನುಭವಿಗಳಾಗಿದ್ದು ಪ್ರತಿ ವಿದ್ಯಾರ್ಥಿಗೆ ತಿಂಗಳಿಗೆ 1500ರಂತೆ ಹತ್ತು ತಿಂಗಳಿಗೆ 15ಸಾವಿರ ಭರಿಸಲಾಗುತ್ತಿದೆ ಎಂದರು.

ನರೇಗಾ ಯೋಜನೆಯಡಿ ರಾಜ್ಯಕ್ಕೆ 6 ಕೋಟಿ ಮಾನವ ದಿನಗಳು ನಿಗದಿಯಾಗಿದೆ, ಆದರೆ ರಾಜ್ಯ ಸರ್ಕಾರದ ಕಾರ್ಯಕ್ಷಮತೆಯನ್ನು ಮನಗಂಡು ಕೇಂದ್ರ 10 ಕೋಟಿ ಮಾನವ ದಿನಗಳನ್ನು ಹೆಚ್ಚಿಸಿ ನಿಗದಿಪಡಿಸಿದೆ ಎಂದು ತಿಳಿಸಿದ ಮುಖ್ಯಮಂತ್ರಿಗಳು, ಈ ಯೋಜನೆಯಡಿ ಕೇಂದ್ರದಿಂದ ಹಣ ಬಿಡುಗಡೆಗೆ ಕಾಯದೆ ರಾಜ್ಯ ಸರ್ಕಾರ ಮುಂಗಡವಾಗಿ 1165 ಕೋಟಿ ರೂಗಳನ್ನು ಯೋಜನೆಗೆ ಬಿಡುಗಡೆ ಮಾಡಿದೆ ಎಂದು ತಿಳಿಸಿದರು. ಅಂತೆಯೇ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿಗಳಿಗೆ ಎಳು ದಿನದೊಳಗಾಗಿ ಹಣ ಪಾವತಿಗೆ ಅನುವಾಗುವಂತೆ ಎಲ್ಲ ಗ್ರಾ.ಪಂ ಅಧ್ಯಕ್ಷರುಗಳು 3 ದಿನದೊಳಗಾಗಿ ಡಿಜಿಟಲ್ ಸಹಿ ಮಾಡುವಂತೆ ಸೂಚಿಸಲಾಗಿದೆ ಎಂದರು.

ಕಳೆದ ಏಪ್ರಿಲ್ 1ರಿಂದ ಇಲ್ಲಿಯವರೆಗೆ ಬರಪರಿಸ್ಥಿತಿ ಎದುರಿಸಲು 1144 ಕೋಟಿ ವಿನಿಯೋಗಿಸಲಾಗಿದ್ದು ಈ ಪೈಕಿ ಕುಡಿಯುವ ನೀರಿಗೆ 800 ಕೋಟಿ ರೂಗಳನ್ನು ಖರ್ಚುಮಾಡಲಾಗಿದೆ ಎಂದ ಅವರು, ಮೊದಲನೇ ಹಂತದಲ್ಲಿ 189 ತಾಲ್ಲೂಕುಗಳಿಗೆ ತಲಾ 50ಲಕ್ಷ, ಎರಡನೇ ಹಂತದಲ್ಲಿ 150 ಕ್ಷೇತ್ರಗಳಿಗೆ 60 ಲಕ್ಷ ರೂ ಮತ್ತು ಮೂರನೇ ಹಂತದಲ್ಲಿ 35 ಕ್ಷೇತ್ರಗಳಿಗೆ 50 ಲಕ್ಷ ರೂಗಳನ್ನು ಕುಡಿಯುವ ನೀರು, ಉದ್ಯೋಗ, ಮೇವು ಒದಗಿಸಲು ಹಣ ಬಿಡುಗಡೆ ಮಾಡಲಾಗಿದೆ ಎಂದು ವಿವರಿಸಿದರು.

ಸರ್ಕಾರಿ ಮತ್ತು ಖಾಸಗಿ ಜಾಗಗಳಲ್ಲಿ ಮೇವು ಬೆಳೆಯಲು ಮೇವಿನ ಕಿಟ್ ಒದಗಿಸಲಾಗುತ್ತಿದೆ ಎಂದು ತಿಳಿಸಿದ ಅವರು, ಅಂತರ್ಜಲ ಅಭಿವೃದ್ದಿಪಡಿಸಲು ಕೆರೆ ಸಂಜೀವಿನಿ ಯೋಜನೆಯಡಿ 50 ಕೋಟಿ ರೂ ವೆಚ್ಚದಲ್ಲಿ ಕೆರೆಗಳ ಹೂಳೆತ್ತುವ, ಕೆರೆ ಅಭಿವೃದ್ದಿ ಕಾರ್ಯಗಳನ್ನು 931 ಕೆರೆಗಳಲ್ಲಿ ಕೈಗೊಂಡು ಆಭಿವೃದ್ದಿಪಡಿಸಲಾಗುತ್ತಿದ್ದು, 1300 ಕೆರೆಗಳನ್ನು ತುಂಬಿಸಲಾಗಿದ್ದು, 116 ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕೈಗೊಳ್ಳಲಾಗಿದೆ ಎಂದರು. ಅಂತೆಯೇ ಶೇ.90 ಸಬ್ಸಿಡಿ ದರದಲ್ಲಿ ಹನಿ ನೀರಾವರಿ ಸೌಲಭ್ಯವನ್ನು ರೈತರಿಗೆ ಒದಗಿಸಲಾಗಿದೆ ಎಂದರು.

ಅನ್ನಭಾಗ್ಯ ಯೋಜನೆಯಡಿ 1.8 ಕೋಟಿ ಕುಟುಂಬಗಳಿಗೆ ಉಚಿತವಾಗಿ ತಲಾ 5 ಕೆಜಿ ಆಹಾರ ಪದಾರ್ಥಗಳನ್ನು ಒದಗಿಸಲಾಗಿದೆ, ಕ್ಷೀರಭಾಗ್ಯ ಯೊಜನೆಯಡಿ 1.2 ಕೋಟಿ ಅಂಗನವಾಡಿ ಮತ್ತು ಪ್ರಾಥಮಿಕ ಶಾಲಾ ಮಕ್ಕಳಿಗೆ ಹಾಲು ಒದಗಿಸಲಾಗಿದೆ ಎಂದು ಮುಖ್ಯಮಂತ್ರಿಗಳು ಸದನಕ್ಕೆ ತಿಳಿಸಿದರು.

ಪರಿಶಿಷ್ಟ/ಜಾತಿ ಮತ್ತು ಪಂಗಡದ ಜನರ ಜನಸಂಖ್ಯೆಗನುಗುಣವಾಗಿ ಅನುದಾನ ಬಿಡುಗಡೆಯಲ್ಲಿ ಕರ್ನಾಟಕ ರಾಜ್ಯ ಇಡೀ ದೇಶದಲ್ಲೇ ಎರಡನೇ ಸ್ಥಾನ ಪಡೆದಿದ್ದು, 2014-15ರಲ್ಲಿ ಪರಿಶಿಷ್ಟ ಜಾತಿ/ಪಂಗಡ ಸಂರಕ್ಷಣಾ ಕ್ರಾಂತಿಕಾರಕ ಕಾಯ್ದೆಯನ್ನು ಜಾರಿಗೆ ತಂದ ರಾಜ್ಯ ನಮ್ಮದಾಗಿದೆ ಎಂದ ಅವರು, ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ 60 ಸಾವಿರ ಕೋಟಿರೂಗಳನ್ನು ಮೀಸಲಿಟ್ಟು ಈ ವರೆಗೆ 44 ಸಾವಿರ ಕೋಟಿ ಖರ್ಚು ಮಾಡಲಾಗಿದೆ ಎಂದರು.

ಕರ್ನಾಟಕ ರೈತ ಸುರಕ್ಷಾ ಪ್ರದಾನಮಂತ್ರಿ ಫಸಲ್ ಭಿಮಾ ಯೋಜನೆಯಡಿ ಬೆಳೆ ಸಂರಕ್ಷಣಾ ತಂತ್ರಾಂಶವನ್ನು ಅಭಿವೃದ್ದಿಪಡಿಸಲಾಗಿದ್ದು, ಮೊಬೈಲ್ ಆಪ್ ಮೂಲಕ ಬೆಳೆ ನಷ್ಟ ಅನುಭವಿಸುವ ರೈತರ ಬಗ್ಗೆ ನಿಖರ ಮಾಹಿತಿ ದೊರಕಲಿದ್ದು, ಬೆಳೆ ನಷ್ಟ ಅನುಭವಿಸುವ ರೈತರ ಉಳಿತಾಯ ಖಾತೆಗಳಿಗೆ ನೇರವಾಗಿ ಬೆಳೆ ವಿಮೆ ಹಣ ಜಮೆಯಾಗಲಿದ್ದು, ಇದರಿಂದಾಗಿ ಬೆಳೆವಿಮೆ ಹಣ ಅನ್ಯರ, ಅನರ್ಹರ ಪಾಲಾಗುವುದು ತಪ್ಪಲಿದೆ ಎಂದರು.

156 ಕೃಷಿ ಮಾರುಕಟ್ಟೆಗಳಲ್ಲಿ ಆನ್‌ಲೈನ್ ಮೂಲಕ ಹರಾಜು ವಹಿವಾಟು ನಡೆಯುತ್ತಿದ್ದು, ಇದರಿಂದಾಗಿ ರೈತರಿಗೆ ಯಾವುದೇ ರೀತಿಯ ಅನ್ಯಾಯ ವಹಿವಾಟಿನಲ್ಲಿ ನಡೆಯುವುದಿಲ್ಲ. ಈ ರೀತಿ ಆನ್‌ಲೈನ್ ವ್ಯವಸ್ಥೆ ಜಾರಿಗೆ ತಂದ ಮೊದಲನೇ ರಾಜ್ಯ ಕರ್ನಾಟಕ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಇಡೀ ದೇಶದಲ್ಲೇ 3 ಲಕ್ಷದವರೆಗೆ ಬಡ್ಡಿರಹಿತ ಸಾಲವನ್ನು ರಾಜ್ಯ ಸರ್ಕಾರ ರೈತರಿಗೆ ನೀಡುತ್ತಿದ್ದು, ಇಲ್ಲಿಯವರೆಗೆ 23.25 ಲಕ್ಷ ರೈತರಿಗೆ ಸಾಲ ನೀಡಲಾಗಿದೆ. ಶೆ.7ರಷ್ಟು ಬಡ್ಡಿಯನ್ನು ರಾಜ್ಯ ಮತ್ತು ಶೇ.3ರಷ್ಟನ್ನು ಕೇಂದ್ರ ತುಂಬುತ್ತಿದ್ದು, ಒಂದು ವರ್ಷಕ್ಕೆ 900 ಕೋಟಿಯನ್ನು ರಾಜ್ಯ ಸರ್ಕಾರ ನೀಡುತ್ತಿದ್ದು, ಆರೂವರೆ ಲಕ್ಷ ಹೊಸ ರೈತರು ಈ ಸಾಲ ಸೌಲಭ್ಯದ ಫಲಾನುಭವಿಗಳಾಗಿದ್ದಾರೆ, ಎಂದ ಮುಖ್ಯಮಂತ್ರಿಗಳು, ಯಶಸ್ವಿನಿ ಸೇರಿದಂತೆ ಹಲವು ಯೋಜನೆಯ ಫಲಾನುಭವಿಯಾಗಲು ಸಹಕಾರ ಸಂಘಗಳಲ್ಲಿ ಸದಸ್ಯತ್ವ ಹೊಂದುವ ರೈತರ ಸದಸ್ಯತ್ವ ವೆಚ್ಚವನ್ನೂ ಸಹ ರಾಜ್ಯ ಸರ್ಕಾರವೇ ಭರಿಸುತ್ತಿದ್ದು, 52 ಸಾವಿರ ಕೋಟಿ ಇದಕ್ಕಾಗಿ ವೆಚ್ಚಮಾಡಲಾಗಿದೆ ಎಂದರು.

ಭೀಕರ ಬರಗಾಲ ಹಿನ್ನಲೆಯಲ್ಲಿ ಒಟ್ಟು 27 ಸಾವಿರ ಬೆಳೆ ನಷ್ಟವಾಗಿದ್ದು ಈ ಹಿನ್ನಲೆಯಲ್ಲಿ ರೈತರು ವಿವಿಧ ಸಹಕಾರಿ ಬ್ಯಾಂಕ್‌ಗಳಲ್ಲಿ ಪಡೆದಿರುವ ಅರ್ಧದಷ್ಟು ಸಾಲ ಮನ್ನಾ ಮಾಡಲು ರಾಜ್ಯ ಸರ್ಕಾರ ಸಿದ್ದವಿದ್ದು, ರೈತರ ವಿವಿಧ ವಾಣಿಜ್ಯ ಬ್ಯಾಂಕ್‌ಗಳಲ್ಲಿ ಪಡೆದಿರುವ ಸಾಲ ಮನ್ನಾ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ತಾವು ಶೀಘ್ರದಲ್ಲೇ ಪತ್ರ ಬರೆದು ಮನವಿ ಮಾಡುವುದಾಗಿ ಅವರು ತಿಳಿಸಿದರು.

ಆರ್ಥಿಕವಾಗಿ ಹಿಂದುಳಿದಿರುವ ವಿದ್ಯಾರ್ಥಿಗಳು ಮೆಡಿಕಲ್ ವ್ಯಾಸಂಗ ಮಾಡಲು ಅನುವಾಗುವಂತೆ ಚಾಮರಾಜನಗರ, ಯಾದಗಿರಿ, ಯಲಬುರ್ಗಾ, ಕೊಪ್ಪಳ, ಉತ್ತರಕನ್ನಡ, ಮತ್ತು ಗದಗ ಜಿಲ್ಲೆಗಳಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಕಾರ್ಯಾರಂಭಗೊಂಡಿದ್ದು, ಪ್ರತಿ ವರ್ಷ 900 ಸೀಟುಗಳು ಹೆಚ್ಚಳಗೊಳ್ಳುತ್ತಿವೆ ಎಂದು ವಿವರಿಸಿದರು.

ಗ್ರಾಮೀಣಾಭಿವೃದ್ದಿ ಇಲಾಖೆ ವತಿಯಿಂದ 10 ಸಾವಿರ ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪನೆಗೆ ಸರ್ಕಾರ ಬದ್ದವಾಗಿದ್ದು, ಈ ಪೈಕಿ ಎಂಟೂವರೆ ಸಾವಿರ ಘಟಕಗಳನ್ನು ಸ್ಥಾಪಿಸಲಾಗಿದ್ದು, ಮಾರ್ಚ್ ತಿಂಗಳೊಳಗಾಗಿ ಇನ್ನೂ ಒಂದು ಸಾವಿರ ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪಿಸಲಾಗುವುದು ಎಂದು ಭರವಸೆ ನೀಡಿದರು.

ಬಂಡವಾಳ ಹೂಡಿಕೆಯಲ್ಲಿ ಕರ್ನಾಟಕ ರಾಜ್ಯ ನಂಬರ್ 1 ರಾಜ್ಯವಾಗಿದ್ದು, ನೂತನ ಕೈಗಾರಿಕಾಭಿವೃದ್ದಿ ಕಾಯ್ದೆಯನ್ನು ಜಾರಿಗೆ ತರುವ ಮೂಲಕ ಬಂಡವಾಳ ಸ್ನೇಹಿ ರಾಜ್ಯವಾಗಿ

ಹೊರಹೊಮ್ಮುವ ಮೂಲಕ ಬಂಡವಾಳಶಾಹಿಗಳಿಗೆ ವಿದ್ಯುತ್, ನೀರು, ಭೂಮಿ ಸೇರಿದಂತೆ ಎಲ್ಲ ಮೂಲಸೌಕರ್ಯ ಒದಗಿಸಲಾಗುತ್ತಿದೆ ಎಂದರು.

ಐದು ವರ್ಷಗಳಲ್ಲಿ 15 ಲಕ್ಷ ಮನೆಗಳನ್ನು ನಿರ್ಮಾಣ ಮಾಡುವ ಗುರಿ ಹೊಂದಲಾಗಿದ್ದು, ಇಲ್ಲಿಯವರೆಗೆ ಹತ್ತೂವರೆ ಲಕ್ಷ ಮನೆ ನಿರ್ಮಾಣ ಮಾಡಲಾಗಿದೆ ಎಂದರು.

ಪೊಲೀಸ್ ಇಲಾಖೆಯಲ್ಲಿ 2015-16ನೇ ಸಾಲಿನಲ್ಲಿ 579 ಪಿಎಸ್ಐ,14333 ಪಿಸಿ, 2016-17ನೇ ಸಾಲಿನಲ್ಲಿ 711 ಪಿಎಸ್ಐ, 8424 ಪಿಸಿ ನೇಮಕಾತಿ ಮಾಡಲಾಗಿದ್ದು, ಮುಂದಿನ ಎರಡು ವರ್ಷಗಳಿಗೆ 8605 ಪೊಲೀಸರ ನೇಮಕಾತಿಗೆ ಈಗಾಗಲೇ ಅನುಮತಿ ನೀಡಲಾಗಿದೆ ಎಂದ ಅವರು, ಆರೋಗ್ಯ ಇಲಾಖೆಯಲ್ಲಿ 597 ಸ್ಪೆಷಲಿಸ್ಟ್, 157 ಎಂಬಿಬಿಎಸ್ ವೈದ್ಯರು, 6270 ದಂತವೈದ್ಯರು ಮತ್ತು 7517 ಪ್ಯಾರಾಮೆಡಿಕಲ್ ಸಿಬ್ಬಂದಿ ನೇಮಕಾತಿ ಅಂತೆಯೇ ಶಿಕ್ಷಣ ಇಲಾಖೆಯಲ್ಲಿ 7900 ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಸೇರಿದಂತೆ 9600 ಶಿಕ್ಷಕರ ನೇಮಕಾತಿ ಮಾಡಲಾಗಿದೆ ಎಂದರು.

ಬೆಂಗಳೂರು ಮಹಾನಗರವನ್ನು ವಿಶ್ವದ ನಂ.1 ಡೈನಾಮಿಕ್ ಸಿಟಿ ಎಂದು ವರ್ಲ್ಡ್ ಎಕನಾಮಿಕ್ ಫೋರಂ ಘೋಷಿಸಿದ್ದು, ಇದು ಸಹ ತಮ್ಮ ಸರ್ಕಾರದ ಅವಧಿಯಲ್ಲಿ ಘೋಷಣೆಯಾಗಿರುವುದು ತಮಗೆ ಹೆಮ್ಮೆ ತಂದಿದೆ ಎಂದರು.

ಮಮತ

## ಬ್ಯುಟಿಷಿಯನ್ ತರಬೇತಿ ಶಿಬಿರ

ಬೆಂಗಳೂರು, ಫೆಬ್ರವರಿ 14, (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಯುವತಿಯರಿಗಾಗಿ ಸ್ವಯಂ ಉದ್ಯೋಗ ಒದಗಿಸಿಕೊಡುವ ನಿಟ್ಟಿನಲ್ಲಿ "ಬ್ಯುಟಿಷಿಯನ್" ತರಬೇತಿ ಶಿಬಿರವನ್ನು ದಿನಾಂಕ: 20-2-2017 ರಿಂದ 04-03-2017 ರವರೆಗೆ ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ಏರ್ಪಡಿಸಿದೆ.

ಈ ತರಬೇತಿ 13 ದಿನಗಳ ಕಾಲ ನಡೆಯಲಿದ್ದು ಕನಿಷ್ಠ ಎಸ್ಎಸ್.ಎಲ್.ಸಿ. ಶಿಕ್ಷಣ(ಉತ್ತೀರ್ಣ/ಅನುತ್ತೀರ್ಣ) ಹೊಂದಿರಬೇಕು. ಹೊರ ಜಿಲ್ಲೆಗಳಿಂದ ಆಗಮಿಸುವ ಶಿಬಿರಾರ್ಥಿಗಳಿಗೆ ಸಾಮಾನ್ಯ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು.

ಆಸಕ್ತ ಯುವತಿಯರು ತಮ್ಮ ಜನ್ಮ ದಿನಾಂಕದ ದಾಖಲೆಯೊಂದಿಗೆ (ಎಸ್.ಎಸ್.ಎಲ್.ಸಿ. ಅಂಕಪಟ್ಟಿ) ಯೊಂದಿಗೆ ಸಹಾಯಕ ನಿರ್ದೇಶಕರು, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ, ಬೆಂಗಳೂರು 560 001 ದೂರವಾಣಿ ಸಂಖ್ಯೆ 080-22214911/8095841941 ನ್ನು ಸಂಪರ್ಕಿಸಬಹುದು.

ಎಸ್ಎಂ/ಕೆಎಂ

## ಮುಖ್ಯಮಂತ್ರಿಗಳ ಪ್ರವಾಸ

ಬೆಂಗಳೂರು, ಫೆಬ್ರವರಿ 14, (ಕರ್ನಾಟಕ ವಾರ್ತೆ)

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆಬ್ರವರಿ 15 ರಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕನಕ ಭವನ ಉದ್ಘಾಟನೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣ ನಿರ್ಮಾಣಕ್ಕೆ ಶಿಲಾನ್ಯಾಸ, ಸಂಗೊಳ್ಳಿ ರಾಯಣ್ಣ ಪ್ರತಿ ಅನಾವರಣ, ಸರ್ಕಾರಿ ಕಟ್ಟಡಗಳ ಶಂಕುಸ್ಥಾಪನೆ/ಉದ್ಘಾಟನೆ ಮತ್ತು ಸರ್ಕಾರಿ ಸವಲತ್ತುಗಳ ವಿತರಣೆ ಮಾಡಿ ಸಾರ್ವಜನಿಕ ಸಭೆಗಳಲ್ಲಿ ಭಾಗವಹಿಸುವರು.

ಕವನ/ಕೆಎಂ

## ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿಜ್ಞಾನ ರಸಪ್ರಶ್ನೆ

ಬೆಂಗಳೂರು, ಫೆಬ್ರವರಿ 14, (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಮತ್ತು ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಸಹಯೋಗದಲ್ಲಿ 2016-17 ನೇ ಸಾಲಿನ ರಾಜ್ಯಮಟ್ಟದ ರಸಪ್ರಶ್ನೆ ಸ್ಪರ್ಧೆಯನ್ನು ಏರ್ಪಡಿಸಿದೆ.

ಈ ಸ್ಪರ್ಧೆಯು ಎರಡು ಹಂತಗಳಲ್ಲಿ ಜರುಗಲಿದ್ದು, ಮೊದಲನೇ ಹಂತದ ಜಿಲ್ಲಾಮಟ್ಟದ ಲಿಖಿತ ರಸಪ್ರಶ್ನೆ ಸ್ಪರ್ಧೆ ಫೆಬ್ರವರಿ 18 ರಂದು ಬೆಳಿಗ್ಗೆ 11-00 ಗಂಟೆಯಿಂದ ಮಧ್ಯಾಹ್ನ 1.00 ರವರೆಗೆ ಆಯಾ ಜಿಲ್ಲೆಯ ಕೇಂದ್ರ ಕಛೇರಿಯಲ್ಲಿ ಜರುಗಲಿರುವುದು. ಜಿಲ್ಲಾ ಮಟ್ಟದ ಪರೀಕ್ಷಾ ಕೇಂದ್ರವನ್ನು ಕರಾವಿಪ ಜಿಲ್ಲಾ ಸಂಯೋಜಕರು ಮತ್ತು ಉಪನಿರ್ದೇಶಕರು ಆಯ್ಕೆ ಮಾಡುತ್ತಾರೆ.

ಪ್ರತಿ ಶಾಲೆಯಿಂದ ಎರಡು ವಿದ್ಯಾರ್ಥಿಗಳ ಒಂದು ಗುಂಪು ಮಾತ್ರ ಪರೀಕ್ಷೆಗೆ ಹಾಜರಾಗಲು ಅವಕಾಶವಿರುವುದು. ಜಿಲ್ಲಾ ಮಟ್ಟದ ಸ್ಪರ್ಧೆಯು ಮಾರ್ಚ್ 4, 2017 ರಂದು ಬೆಂಗಳೂರಿನಲ್ಲಿ ಜರುಗುವುದು. ಹೆಚ್ಚಿನ ವಿವರಗಳಿಗೆ ಆಯಾ ಜಿಲ್ಲೆಯ ಉಪ ನಿರ್ದೇಶಕರ ಕಛೇರಿಯನ್ನು ಮತ್ತು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಕಛೇರಿ, ರಾಜ್ಯ ಸಂಯೋಜಕ ಆರ್.ಎಸ್. ಪಾಟೀಲ್ ಮೊ. 9448867705 ಹಾಗೂ ಸಹ ಸಂಚಾಲಕರಾದ ಬಿ. ದೊಡ್ಡಬಸಪ್ಪ, ಮೊ. 9880656200 ನ್ನು ಸಂಪರ್ಕಿಸಬಹುದಾಗಿದೆ.

ಕವನ/ಕೆಎಂ